ಬಾಗೇಪಲ್ಲಿ ಹಾಗೂ ಗುಡಿಬಂಡೆ ಪಟ್ಟಣದಲ್ಲಿ ಒಳಚರಂಡಿ ಸಮಸ್ಯೆಗಳು

322 (566) ಶ್ರೀ ಎಸ್.ಸಂಪಂಗಿ (ಬಾಗೇಪಲ್ಲಿ) : ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾಗೇಪಲ್ಲಿ ಹಾಗೂ ಗುಡಿಬಂಡೆ ಪಟ್ಟಣದಲ್ಲಿ ಒಳಚರಂಡಿಗಳ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಗುಡಿಬಂಡೆ ಪಟ್ಟಣದಲ್ಲಿ ಕುಡಿಯುವ ನೀರಿನ ಅವ್ಯವಸ್ಥೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಾಗೇಪಲ್ಲಿ ಹಾಗೂ ಗುಡಿಬಂಡೆ ಪಟ್ಟಣದಲ್ಲಿ ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶವಿದ್ದು ಇದರಿಂದ ಜನರು ಖಾಯಿಲೆಗಳಿಂದ ನರಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಇದರ ನಿವಾರಣೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಗಳು) :

ಅ) ಬಂದಿದೆ

ಆ) ಬಂದಿದೆ

ಇ) ಸರ್ಕಾರದ ಗಮನಕ್ಕೆ ಬಂದಿದೆ. ಈ ತೊಂದರೆಯನ್ನು ನಿವಾರಣೆ ಮಾಡಲು ಚಿತ್ರಾವತಿ ನದಿಗೆ ಅಣೇಕಟ್ಟು ನಿರ್ಮಿಸಿ, ಪರಗೋಡು ಗ್ರಾಮದ ಕೆರೆಯನ್ನು ನಿರ್ಮಿಸಿ, ಅಲ್ಲಿ ಶೇಖರಿಸುವ ನೀರನ್ನು ಶುದ್ಧೀಕರಿಸಿ, ಬಾಗೇಪಲ್ಲಿ ಹಾಗೂ ಗುಡಿಬಂಡೆ ಪಟ್ಟಣಗಳ ಜನತೆಗೆ ಸರಬರಾಜು ಮಾಡಲು ಯೋಜಿಸಲಾಗಿದೆ.

ರೇಷ್ಮೆ ಇಲಾಖೆಯ ಕುಂದು ಕೊರತೆಗಳು

324 (569) ಶ್ರೀ ಎಸ್. ಸಂಪಂಗಿ (ಬಾಗೇಪಲ್ಲಿ) : ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರವು ರೇಷ್ಮೆ ಬೆಳೆಗೆ ಪ್ರಸಿದ್ಧವಾಗಿದ್ದು, ರೈತರಿಗೆ ರೇಷ್ಮೆ ಗೂಡಿನ ಮಾರುಕಟ್ಟೆ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಮಾರುಕಟ್ಟೆ ನಿರ್ಮಾಣಕ್ಕೆ ಏನು ಕ್ರಮ ಕೈಗೊಳ್ಳಲಾಗುವುದು.

ಆ) ರೇಷ್ಮೆ ಇಲಾಖೆಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ ಈ ಕಟ್ಟಡ ನಿರ್ಮಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಂ. ಮಹದೇವ್ (ರೇಷ್ಮೆ ಮತ್ತು ಜವಳಿ ಸಚಿವರು) :

ಅ) ಬಂದಿದೆ, ಬಾಗೇಪಲ್ಲಿ ಕ್ಷೇತ್ರದಲ್ಲಿ ರೀಲರ್‌ಗಳು ಇಲ್ಲದ ಕಾರಣ ಪ್ರಸ್ತುತ ಗೂಡಿನ ಮಾರುಕಟ್ಟೆಯನ್ನು ಸ್ಥಾಪಿಸಿರುವುದಿಲ್ಲ. ಆದರೆ ಈ ತಾಲ್ಲೂಕಿನ ರೇಷ್ಮೆ ಬೆಳೆಗಾರರು ಹತ್ತಿರದ

ಚಿಕ್ಕಬಳ್ಳಾಪುರ ಚಿಂತಾಮಣಿ ಶಿಡ್ಲಘಟ್ಟ ಮತ್ತು ಶ್ರೀನಿವಾಪುರದಲ್ಲಿ ಸ್ಥಾಪಿಸಲಾಗಿರುವ ರೇಷ್ಮೆ ಗೂಡು ಮಾರುಕಟ್ಟೆಗಳಲ್ಲಿ ತಾವು ಬೆಳೆದ ಗೂಡಿನ ವಹಿವಾಟು ನಡೆಸುತ್ತಿದ್ದಾರೆ. ಈ ಮೇಲ್ಕಾಣಿಸಿರುವ ತಾಲ್ಲೂಕುಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ರೀಲರುಗಳು ಇರುವ ಕಾರಣ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ರೈತರಿಗೂ ಸ್ಪರ್ಧಾತ್ಮಕ ದರ ದೊರೆಯುತ್ತಿದೆ.

ಆ) ಬಂದಿದೆ, ರೀಲರ್‌ಗಳ ಸಂಖ್ಯೆಯ ಬಾಗೇಪಲ್ಲಿ ವಿಧಾನ ಸಭಾ ಕ್ಷೇತ್ರದಲ್ಲಿ ಹೆಚ್ಚಾದಲ್ಲಿ ಒಂದು ಪ್ರತ್ಯೇಕವಾದ ಮಾರುಕಟ್ಟೆ ಕಟ್ಟಡವನ್ನು ನಿರ್ಮಿಸಿ ಮಾರುಕಟ್ಟೆ ಚಟುವಟಿಕೆಗಳನ್ನು ಪ್ರಾರಂಭಿಸಲಾಗುವುದು.

ಮೈಸೂರು ನಗರದಲ್ಲಿ ಮನೆ ಕಟ್ಟಲು ಲೈಸನ್ಸ್ ನೀಡುವುದು

325 (85) ಶ್ರೀ ಶಂಕರಲಿಂಗೇಗೌಡ .ಹೆಚ್.ಎಸ್ (ಚಾಮರಾಜ) : ಮಾನ್ಯ ನಗರಾಭಿವೃದ್ಧಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರದ ಅನೇಕ ಅನಧಿಕೃತ ಬಡಾವಣೆಗಳನ್ನು ಸಕ್ರಮಗೊಳಿಸಿ ಕೋಲ್ಡರ್ ಖಾತೆಗಳನ್ನು ನೀಡಲಾಗುತ್ತಿದ್ದು ಸದರಿ ಬಡಾವಣೆಗಳಲ್ಲಿ ನಿವೇಶನದಾರರು ಹೊಸದಾಗಿ ಮನೆ ಕಟ್ಟಲು ಲೈಸನ್ಸ್ ನೀಡಲು ಸರ್ಕಾರವು ತೀರ್ಮಾನಿಸಿದೆಯೆ?

ಆ) ಹೀಗೆ ಲೈಸನ್ಸ್ ನೀಡುವುದರಿಂದ ವ್ಯವಸ್ಥಿತವಾಗಿ ಬಡಾವಣೆಯನ್ನು ಅಭಿವೃದ್ಧಿಪಡಿಸಿದಂತಾಗುವುದಿಲ್ಲವೆ?

ಇ) ಈ ಬಗ್ಗೆ ಲೈಸನ್ಸ್ ನೀಡುವಲ್ಲಿ ಸರ್ಕಾರದ ಅಭಿಪ್ರಾಯವೇನು?

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಮೈಸೂರು ನಗರದಲ್ಲಿರತಕ್ಕ ಅನಧಿಕೃತ ಬಡಾವಣೆಗಳು

326 (86) ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ (ಚಾಮರಾಜ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರದಲ್ಲಿರುವ ಅನಧಿಕೃತ ಬಡಾವಣೆಗಳು ಯಾವುವು?

ಆ) ಆಯಾಯಾ ಅನಧಿಕೃತ ಬಡಾವಣೆಯಲ್ಲಿ ಎಷ್ಟೆಷ್ಟು ಮನೆ, ನಿವೇಶನಗಳಿವೆ; ವಿವರ ಒದಗಿಸುವುದು.

ಇ) ಅವುಗಳಲ್ಲಿ ಎಷ್ಟು ಮಂದಿ ಮನೆಗಳವರು ಹೋಲ್ಡರ್ ಖಾತೆ ಪಡೆದಿರುವರು; ಉಳಿಕೆ ಎಷ್ಟು ಮಂದಿ ಪಡೆಯಬೇಕಿದೆ?